ದಿನಾಂಕ **21.08.2019ರಂದು** ಬೆಳಿಗ್ಗೆ **11:00ಗಂಟೆಗೆ** ನಡೆದ ಗ್ರಾಮೀಣ ಇಂಧನ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ನಡವಳಿಗಳು.

ಸಭೆಯಲ್ಲಿ ಹಾಜರಿದ್ದವರು ; ಪಟ್ಟಿ ಲಗತ್ತಿಸಿದೆ.

ಶ್ರೀ ಕೆ ರೇವಣಪ್ಪ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಸಭೆಯಲ್ಲಿ ಉಪಸ್ಥಿತರಿದ್ದವರನ್ನೆಲ್ಲಾ ಸ್ವಾಗತಿಸಿದರು.

1. ನಿರ್ದೇಶಕರು (ಗ್ರಾಮೂಸೌ-2) ರವರು ನವ ರಾಷ್ಟ್ರೀಯ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮದಡಿ 2019-20ನೇ ಸಾಲಿನ ಜುಲೈ ಅಂತ್ಯದವರೆಗೆ ಸಾಧಿಸಿದ ಪ್ರಗತಿ ವರದಿಯನ್ನು ಪರಿಶೀಲಿಸಿದರು. ಕಾರ್ಯಕ್ರಮದಡಿ ನಿಗದಿಪಡಿಸಿದ 7000 ಜೈವಾನಿಲ ಸ್ಥಾವರಗಳ ಭೌತಿಕ ಗುರಿಗೆ ಶೇ.6ರಷ್ಟು ಪ್ರಗತಿ ಸಾಧಿಸಿರುವುದನ್ನು ಸಭೆಯು ಗಂಭೀರವಾಗಿ ಪರಿಗಣಿಸಿತು.
2. ಮೈಸೂರು ಮತ್ತು ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ಗಳನ್ನು ಹೊರತುಪಡಿಸಿದಾಗ ಅತ್ಯಂತ ಕಡಿಮೆ ಹಾಗೂ ಶೂನ್ಯ ಪ್ರಗತಿ ಸಾಧಿಸಿರುವ ಇನ್ನುಳಿದ ಜಿಲ್ಲೆಗಳ ಪ್ರಗತಿ ಕುರಿತು ಸಭೆಯು ಗಂಭೀರವಾಗಿ ಪರಿಗಣಿಸಿದ್ದು, ಹೆಚ್ಚಿನ ಗುರಿ ಹೊಂದಿದ ಜಿಲ್ಲೆಗಳಾದ ಬೆಳಗಾವಿ, ದಕ್ಷಿಣ ಕನ್ನಡ, ಕಲಬುರಗಿ, ಯಾದಗಿರಿ, ವಿಜಯಪುರ ಮತ್ತು ಯಾದಗಿರಿ ಡಿಸೆಂಬರ್ 2019ರೊಳಗಾಗಿ ಹಾಗೂ ಕಡಿಮೆ ಗುರಿಯನ್ನು ಹೊಂದಿದ ಇನ್ನುಳಿದ ಜಿಲ್ಲೆಗಳು ಸೆಪ್ಟೆಂಬರ್ 2019 ಅಂತ್ಯದೊಳಗಾಗಿ ಪೂರ್ಣ ಪ್ರಮಾಣದ ಪ್ರಗತಿ ಸಾಧಿಸುವಂತೆ ಸೂಚಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

3. ಕಾರ್ಯಕ್ರಮದಡಿ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರು(ಸಗ್ರಾಇಂಕಾ) ನಿರ್ಮಾಣಗೊಂಡ ಹಾಗೂ ನಿರ್ಮಾಣ ಹಂತದಲ್ಲಿರುವ ಘಟಕಗಳ ಕುರಿತಂತೆ ಟರ್ನ್ ಕೀ ಏಜನ್ಸಿ ರವರಿಂದ ಲಿಖಿತ ಮೂಲಕ ಪ್ರಗತಿ ವರದಿಯನ್ನು ಪಡೆದು ಪ್ರತಿ ತಿಂಗಳು 5ನೇ ತಾರೀಖಿನೊಳಗೆ ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸುವುದು. 5ನೇ ತಾರೀಖಿನ ನಂತರ ಸ್ವೀಕೃತಗೊಂಡ ಪ್ರಗತಿ ವರದಿಗಳನ್ನು ಆ ಮಾಹೆಯ ಪ್ರಗತಿ ವರದಿಗೆ ಸೇರ್ಪಡೆ ಮಾಡುವುದಿಲ್ಲ.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

4. MGNREGA ರಡಿ ನಿರ್ಮಿಸಲಾಗುವ Cattle Shed ಗಳ ಫಲಾನುಭವಿಗಳನ್ನು NNBOMP ಕಾರ್ಯಕ್ರಮದಡಿ ಆಯ್ಕೆ ಮಾಡುವಂತೆ ತಿಳಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

5. ಕಾರ್ಯಕ್ರಮದ ಬ್ಯಾಂಕ್ ಖಾತೆಯಲ್ಲಿ ಬಹಳಷ್ಟು ಕೇಂದ್ರ ಹಾಗೂ ರಾಜ್ಯ ಸಹಾಯಧನ ಯೋಜನೆಗೆ ವೆಚ್ಚವಾಗದೇ ಉಳಿಕೆಯಾಗಿರುವುದನ್ನು ಸಭೆಯು ಗಂಭೀರವಾಗಿ ಪರಿಗಣಿಸಿದ್ದು, (ಉದಾ: ಮೈಸೂರು, ಧಾರವಾಡ, ರಾಮನಗರ ಮತ್ತು ಬೆಂಗಳೂರು(ನ)) ಕಾರ್ಯಕ್ರಮದಡಿ ಹಿಂದಿನ ಸಾಲುಗಳಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸಹಾಯಧನ ಮತ್ತು ಟರ್ನ್ ಕೀ ನಿರ್ವಹಣಾ ವೆಚ್ಚವನ್ನು ಲೆಕ್ಕಚಾರ ಮಾಡಿ ಅಗತ್ಯವಿರುವ ಅನುದಾನವನ್ನು ಹೊರತುಪಡಿಸಿ ಇನ್ನುಳಿದ ಅನುದಾನವನ್ನು ಅವಶ್ಯಕವಿರುವ ಜಿಲ್ಲಾ ಪಂಚಾಯತ್‌ಗಳಿಗೆ ವರ್ಗಾಯಿಸುವ ಕುರಿತಂತೆ ಸೂಕ್ತ ಪ್ರಸ್ತಾವನೆಯನ್ನು ಕೂಡಲೇ ನಿಗದಿತ ನಮೂನೆಯಲ್ಲಿ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

6. ಶಿವಮೊಗ್ಗ ಜಿಲ್ಲೆಯ ಯೋಜನಾ ಅಭಿಯಂತರರಾದ ಶ್ರೀ ಎಂ. ಹೆಚ್, ಭಾಸ್ಕರ್ ರವರು ಅನಾರೋಗ್ಯ ಪೀಡಿತರಾಗಿರುವುದನ್ನು ಸಭೆಯು ಮನಗಂಡು ಕಾರ್ಯಕ್ರಮದ ಹಿತದೃಷ್ಟಿಯಿಂದ 2019-20ನೇ ಸಾಲಿಗೆ ಶಿವಮೊಗ್ಗ ಜಿಲ್ಲೆಗೆ ನಿಗದಿಪಡಿಸಿದ 400 ಜೈವಾನಿಲ ಸ್ಥಾವರಗಳ ಭೌತಿಕ ಗುರಿಯಲ್ಲಿ ತಲಾ 100ರಂತೆ ಬೀದರ್, ಉತ್ತರ ಕನ್ನಡ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಮರು ಹಂಚಿಕೆ ಮಾಡಲು ತೀರ್ಮಾನಿಸಲಾಯಿತು.

(ಕ್ರಮ: ನಿರ್ದೇಶಕರು(ಗ್ರಾಮೂಸೌ-2) ಗ್ರಾಅಪ ಇಲಾಖೆ)

7. ಶ್ರೀ ಎಂ. ಹೆಚ್, ಭಾಸ್ಕರ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರ ಅನಾರೋಗ್ಯದ ನಿಮಿತ್ತ ಶಿವಮೊಗ್ಗ ಜಿಲ್ಲೆಗೆ ಹತ್ತಿರದ ಜಿಲ್ಲೆಯಾದ ದಾವಣಗೆರೆ ಜಿಲ್ಲಾ ಪಂಚಾಯತ್ ನ ಗ್ರಾಮೀಣ ಇಂಧನ ಕಾರ್ಯಕ್ರಮದ ಉಸ್ತುವಾರಿ ನಿರ್ವಹಿಸುತ್ತಿರುವ ಶ್ರೀ. ಟಿ. ಎಸ್. ಬಸವರಾಜಪ್ಪ ಇವರನ್ನು ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ಇಂಧನ ಕಾರ್ಯಕ್ರಮದ ಉಸ್ತುವಾರಿ ನಿರ್ವಹಿಸಲು ಹೆಚ್ಚುವರಿ ಪ್ರಭಾರದಲ್ಲಿರಿಸಲು ತೀರ್ಮಾನಿಸಲಾಯಿತು.

(ಕ್ರಮ: ನಿರ್ದೇಶಕರು(ಗ್ರಾಮೂಸೌ-2) ಗ್ರಾಅಪ ಇಲಾಖೆ)

8. ಪ್ರಸ್ತುತ ಬಳ್ಳಾರಿ ಜಿಲ್ಲಾ ಪಂಚಾಯತ್‌ಯಲ್ಲಿ ಗ್ರಾಮೀಣ ಇಂಧನ ಕಾರ್ಯಕ್ರಮದ ಉಸ್ತುವಾರಿ ನಿರ್ವಹಿಸುತ್ತಿರುವ ಶ್ರೀ ಜಿ. ಎಲ್. ಬದಿ ರವರಿಗೆ ಕೊಪ್ಪಳ ಜಿಲ್ಲೆಯ ಗ್ರಾಮೀಣ ಇಂಧನ ಕಾರ್ಯಕ್ರಮದ ಹೆಚ್ಚುವರಿ ಪ್ರಭಾರದಲ್ಲಿರಿಸಲು ತೀರ್ಮಾನಿಸಲಾಯಿತು.

(ಕ್ರಮ: ನಿರ್ದೇಶಕರು(ಗ್ರಾಮೂಸೌ-2) ಗ್ರಾಅಪ ಇಲಾಖೆ)

9. 2019-20ನೇ ಸಾಲಿಗೆ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಿಗೆ ನಿಗದಿಪಡಿಸಿದ ಭೌತಿಕ ಗುರಿಯನ್ನು ಪೂರ್ಣ ಪ್ರಮಾಣದಲ್ಲಿ ಸಾಧಿಸುವ ಕುರಿತಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ ಮತ್ತು ಉಡುಪಿ ರವರಿಂದ ವರದಿ ಪಡೆಯಲು ತೀರ್ಮಾನಿಸಲಾಯಿತು.

(ಕ್ರಮ: ನಿರ್ದೇಶಕರು(ಗ್ರಾಮೂಸೌ-2) ಗ್ರಾಅಪ ಇಲಾಖೆ)

10. NNBOMP ಕಾರ್ಯಕ್ರಮದಡಿ ಲಭ್ಯವಾಗುವ ಸಹಾಯಧನದೊಂದಿಗೆ ಸರ್ಕಾರೇತರ ಸಂಘ ಸಂಸ್ಥೆಗಳ ಸಹಾಯಾನುದಾನದ ಸಹಭಾಗಿತ್ವದಲ್ಲಿ ಜೈವಾನಿಲ ಸ್ಥಾವರಗಳನ್ನು ನಿರ್ಮಿಸಿದಲ್ಲಿ ಅಂತಹ ಸ್ಥಾವರಗಳ ಮೇಲ್ಭಾಗದಲ್ಲಿ ಇಲಾಖೆ ಹಾಗೂ ಕಾರ್ಯಕ್ರಮದ ಹೆಸರನ್ನು ಬರೆಯಿಸತಕ್ಕದ್ದು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

11. 2018-19 ನೇ ಸಾಲಿಗೆ ಸಂಬಂಧಿಸಿದಂತೆ ಬಾಗಲಕೋಟೆ, ಬೆಂಗಳೂರು(ನ), ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ಧಾರವಾಡ, ಕೋಲಾರ, ಕೊಪ್ಪಳ, ರಾಮನಗರ, ರಾಯಚೂರು ಮತ್ತು ಶಿವಮೊಗ್ಗ ಜಿಲ್ಲಾ ಪಂಚಾಯತ್‌ಗಳು CA ಆಡಿಟ್ ವರದಿಯೊಂದಿಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸೆಪ್ಟೆಂಬರ್ 2019ರ ಅಂತ್ಯದೊಳಗೆ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಯಿತು.

(ಕ್ರಮ: ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

12. ಜಿಲ್ಲಾ ಮಟ್ಟದಲ್ಲಿ ಮೂರು ತಿಂಗಳಿಗೊಮ್ಮೆ ಕಾರ್ಯಕ್ರಮದಡಿ ಪ್ರಗತಿ ಪರಿಶೀಲಿಸಲು ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ ಪರಿಶೀಲನಾ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಯಿತು.

| | | |
|---|---|---|
| 1 | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ | ಅಧ್ಯಕ್ಷರು |
| 2 | ಉಪ ಕಾರ್ಯದರ್ಶಿ(ಅಭಿವೃದ್ಧಿ) / ಯೋಜನಾ ನಿರ್ದೇಶಕರು / ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್ | ಸದಸ್ಯರು |
| 3 | ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ | ಸದಸ್ಯರು |
| 4 | ಜಂಟಿ ನಿರ್ದೇಶಕರು, ಜಿಲ್ಲಾ ತೋಟಗಾರಿಕೆ ಇಲಾಖೆ | ಸದಸ್ಯರು |
| 5 | ಜಂಟಿ ನಿರ್ದೇಶಕರು, ಜಿಲ್ಲಾ ಕೃಷಿ ಇಲಾಖೆ | ಸದಸ್ಯರು |
| 6 | ಉಪ ನಿರ್ದೇಶಕರು, ಜಿಲ್ಲಾ ಪಶು ಸಂಗೋಪನೆ | ಸದಸ್ಯರು |
| 7 | ಕರ್ನಾಟಕ ಕೃಷಿ ಕೇಂದ್ರದ ಪ್ರತಿನಿಧಿ | ಸದಸ್ಯರು |
| 8 | Lead NGO ನ ಪ್ರತಿನಿಧಿ | ಸದಸ್ಯರು |
| 9 | ನಬಾರ್ಡ್ ಪ್ರತಿನಿಧಿ | ಸದಸ್ಯರು |
| 10 | ಯೋಜನಾ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯ ಕಾರ್ಯದರ್ಶಿ |

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

13. DSS ತಂತ್ರಾಂಶದಡಿ ಕಾರ್ಯಕ್ರಮದ ಮಾಹಿತಿಯನ್ನು ಅಳವಡಿಸುವ ಕುರಿತಂತೆ ಸುದೀರ್ಘವಾಗಿ ಚರ್ಚಿಸಿದಾಗ DSS ತಂತ್ರಾಂಶದಡಿ ಲೆಕ್ಕ ಶೀರ್ಷಿಕೆವಾರು ಪ್ರಾರಂಭಿಕ ಶಿಲ್ಕು, ಬಿಡುಗಡೆಯಾದ ಅನುದಾನ, ವೆಚ್ಚ, ಉಳಿಕೆ ಕುರಿತಂತೆ ಇಂಧೀಕರಿಸಲಾಗುತ್ತಿದೆ. ಆದರೆ NNBOMP ಕಾರ್ಯಕ್ರಮವು ಕೇಂದ್ರ ವಲಯದ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರವು Public Financial Management System(PFMS) ರಡಿ ಅನುದಾನವನ್ನು ಕಾರ್ಯಕ್ರಮದ ಖಾತೆಗೆ ನೇರವಾಗಿ ಬಿಡುಗಡೆ ಮಾಡುತ್ತಿರುವುದರಿಂದ ಕೇಂದ್ರ ಸಹಾಯಧನದ ವಿವರಗಳನ್ನು Upload ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ. ಇದರಿಂದಾಗಿ MPIC ಪ್ರಗತಿ ಪರಿಶೀಲನಾ ಸಭೆಯಲ್ಲಿ ನಿಗದಿಪಡಿಸಿದ ಅನುದಾನಕ್ಕಿಂತ ಹೆಚ್ಚಿನ ಆರ್ಥಿಕ ಪ್ರಗತಿ ನಮೂದಿಸುತ್ತಿರುವುದು ಆಕ್ಷೇಪಣೆಗೆ ಒಳಪಡುತ್ತದೆ. ಆದ್ದರಿಂದ ಲೆಕ್ಕ ಶೀರ್ಷಿಕೆ 2810-60-196-6-01ರಡಿ ಕೇಂದ್ರ ಹಾಗೂ ರಾಜ್ಯ ಎಂಬ ಪ್ರತ್ಯೇಕ Option ನೀಡುವಂತೆ ಯೋಜನಾ ಇಲಾಖೆಯನ್ನು ಕೋರಲು ತೀರ್ಮಾನಿಸಲಾಯಿತು.

(ಕ್ರಮ: ನಿರ್ದೇಶಕರು(ಗ್ರಾಮೂಸೌ-2) ಗ್ರಾಅಪ ಇಲಾಖೆ)

14. ಜಿಲ್ಲಾ ಪಂಚಾಯತ್‌ಗಳಲ್ಲಿ NNBOMP ಕಾರ್ಯಕ್ರಮದಡಿ PFMS ತಂತ್ರಾಂಶದ ಬಳಕೆ ಕುರಿತು ಏನಾದರೂ ಸಮಸ್ಯೆಗಳಿದ್ದಲ್ಲಿ Screen Shot ನೊಂದಿಗೆ ಸರ್ಕಾರಕ್ಕೆ ಮಾಹಿತಿ ನೀಡುವಂತೆ ಹಾಗೂ ಜಿಲ್ಲಾ ಪಂಚಾಯತ್‌ಗಳಲ್ಲಿನ DPM ಗಳನ್ನು NNBOMP ದ PFMS ತಂತ್ರಾಂಶವನ್ನು ನಿರ್ವಹಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ತೀರ್ಮಾನಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

15. ಚಿತ್ರದುರ್ಗ ಹಾಗೂ ರಾಯಚೂರು ಜಿಲ್ಲೆಗಳಿಗೆ ಸಂಬಂಧಿಸಿದ ಫಲಾನುಭವಿಗಳ ವಿವರಗಳ PDF ಮುಖೇನಾವಾರು ವರ್ಷವಾರು Breakup ನೊಂದಿಗೆ ಆಗಸ್ಟ್ 2019ರ ಅಂತ್ಯದೊಳಗೆ ಸಲ್ಲಿಸುವಂತೆ ಸೂಚಿಸಲಾಯಿತು.

(ಕ್ರಮ: ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

16. ತ್ರೈಮಾಸಿಕ ಪ್ರಗತಿ ವರದಿಗಳನ್ನು ಕಡ್ಡಾಯವಾಗಿ ನಿಗದಿತ ನಮೂನೆಯಲ್ಲಿ ಸಲ್ಲಿಸುವಂತೆ ಸೂಚಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

17. ಕೇಂದ್ರಿಕೃತ ಸೌರ ವಿದ್ಯುತ್ ಘಟಕಗಳಿಗೆ ಸಂಬಂಧಿಸಿದ ಉಪಕರಣವಾರು Expression of Interest ಕುರಿತಂತೆ ಹಾಸನ ಮೈಸೂರು, ಹಾವೇರಿ, ಬೆಂಗಳೂರು(ಗ್ರಾ) ಮತ್ತು ಬೆಂಗಳೂರು(ನ) ಜಿಲ್ಲಾ ಪಂಚಾಯತ್‌ನ ಯೋಜನಾ ಅಭಿಯಂತರರೊಂದಿಗೆ ದಿನಾಂಕ 28.08.2019ರಂದು ಚರ್ಚಿಸಲು ಸಭೆ ಏರ್ಪಡಿಸಲು ತೀರ್ಮಾನಿಸಲಾಯಿತು.

(ಕ್ರಮ: ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು)

18. ಶ್ರೀ ಕೃಷ್ಣ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಧಾರವಾಡ(ಪ್ರಭಾರ), ರವರು 2017–18ನೇ ಸಾಲಿನ ನೂತನ ಸೌರ ಬೆಳಕು ಯೋಜನಾ ಅನುಷ್ಠಾನ ಕುರಿತಂತೆ ಸಧ್ಯದಲ್ಲೇ ಕಾರ್ಯಾದೇಶ ನೀಡಲಾಗುವುದೆಂದು ಸಭೆಗೆ ತಿಳಿಸಿದರು. ಇದರನ್ವಯ ಕೂಡಲೇ ಕ್ರಮಕೈಗೊಳ್ಳುವುದು.

(ಕ್ರಮ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ., ಧಾರವಾಡ)

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಕೆ. ರೇವಣಪ್ಪ)
ನಿರ್ದೇಶಕರು(ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಕಡತ ಸಂಖ್ಯೆ:ಗ್ರಾಅಪ/29/ಜೈಅಯೋ/2019 ಬೆಂಗಳೂರು, ದಿನಾಂಕ.28.08.2019.

ಗೆ:

1. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರು(ಸಗ್ರಾಇಂಕಾ).
3. ರಕ್ಷ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು,

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪ ಇಲಾಖೆ.
2. ವಿಶೇಷ ಅಧಿಕಾರಿ, ಇಲಾಖಾ ಗಣಕಜಾಲ, ಗ್ರಾಅಪ ಇಲಾಖೆ.

--

## ದಿನಾಂಕ 21.08.2019 ರಂದು ನಡೆದ ಗ್ರಾಇಂಕಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹಾಜರಾದವರ ಪಟ್ಟಿ.

1. ಶ್ರೀ. ಕೆ. ರೇವಣಪ್ಪ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಉಪ. ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಶ್ರೀಮತಿ ಭಾಗ್ಯಶ್ರೀ ಹೆಚ್. ಎಸ್. ಉಪ ನಿರ್ದೇಶಕರು(ಗ್ರಾಮೂಸೌ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಶ್ರೀಮತಿ ನೇತ್ರಾವತಿ, ಅಧೀಕ್ಷಕರು, ಗ್ರಾಮೂಸೌ-2, ಗ್ರಾಅಪಂ. ರಾಜ್ ಇಲಾಖೆ.
4. ಶ್ರೀ ಮಾರ್ಕಂಡಯ್ಯ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್ ಬಾಗಲಕೋಟೆ & ವಿಜಯಪುರ.
5. ಶ್ರೀ ಎಂ. ಎಸ್. ಸುದರ್ಶನ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ), ಚಿಕ್ಕಬಳ್ಳಾಪುರ ಮತ್ತು ಕೋಲಾರ.
6. ಶ್ರೀ ಶಿವಣ್ಣ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಂಗಳೂರು(ನ).
7. ಶ್ರೀ ಶಿವಾನಂದ ಕಮತಗಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಳಗಾವಿ.
8. ಶ್ರೀ ಜಿ. ಎಲ್. ಬದಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬಳ್ಳಾರಿ.
9. ಶ್ರೀ ಬಸವರಾಜ್ ಯಲಬುರಗಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಮಂಡ್ಯ & ಚಾಮರಾಜನಗರ.
10. ಶ್ರೀ ಶೇಕ್ ಅಹಮ್ಮದ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಚಿತ್ರದುರ್ಗ.
11. ಶ್ರೀ ಬಸವರಾಜಪ್ಪ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ದಾವಣಗೆರೆ.
12. ಶ್ರೀ ದತ್ತಾತ್ರಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು.
13. ಶ್ರೀ ಕೃಷ್ಣ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
14. ಶ್ರೀ ಉತ್ತಮ ಕುಮಾರ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಹಾವೇರಿ & ಗದಗ.
15. ಶ್ರೀ ಶ್ರೀನಿವಾಸ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ತುಮಕೂರು.
16. ಶ್ರೀ ಎಸ್. ಮುರ್ತುಜಾ ಆಲಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಮೈಸೂರು.
17. ಶ್ರೀ ನಂಜುಂಡೇ ಗೌಡ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ರಾಮನಗರ.
18. ಶ್ರೀ ಬಾಲರಾಜ್ ಹುಗಾರ್, ವಿಷಯ ನಿರ್ವಾಹಕರು, ಜಿಲ್ಲಾ ಪಂಚಾಯತ್, ಬೀದರ್.
19. ಶ್ರೀ ಎಸ್. ಪಿ. ಪಾಟೀಲ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಕಲಬುರಗಿ ಮತ್ತು ಯಾದಗಿರಿ.

ಗೈರುಹಾಜರಾದವರು,

1. ಶ್ರೀ ಎಂ. ಹೆಚ್, ಭಾಸ್ಕರ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಶಿವಮೊಗ್ಗ.

–0–0–